ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು–65

ರಾಗುಟ್ಟಹಳ್ಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ:27.05.16

ಈ ವಾರದ ಮುನ್ಸೂಚನೆ (27.5.16 to 31.5.16 ವರೆಗೆ)

ನಿಯತಾಂಕಗಳು	27.05.16	28.05.16	29.05.16	30.05.16	31.05.16
ಮಳೆ (ಮಿ ಮಿ)	0	2	0	2	2
ಗರಿಷ್ಠ ಉಷ್ಣಾಂಶ(ಡಿ.ಸೆ.)	34	34	34	34	34
ಕನಿಷ್ಠ ಉಷ್ಣಾಂಶ (ಡಿ.ಸೆ.)	22	22	22	22	22
ಮೋಡ (ಪ್ರಮಾಣ)	6	5	5	5	5
ಅರ್ದ್ರತೆ ೭.೨೦ ಬೆ (ಶೇ)	91	93	76	76	78
ಅರ್ದ್ರತೆ ೨.೨೦ ಮ (ಶೇ)	36	42	33	30	29
ಗಾಳಿಯ ವೇಗ (ಕಿ.ಮಿ/ಗಂಟೆಗೆ)	23	19	18	17	16
ಗಾಳಿಯ ದಿಕ್ಕು (ಡಿಗ್ರಿ)	274	264	264	280	276

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ರಾಗುಟ್ಟಹಳ್ಳಿ ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಮೋಡ ಕವಿದ ವಾತಾವರಣವಿದ್ದು ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶವು 34°C ಮತ್ತು ಕನಿಷ್ಠ 22°C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 76-93 % ಇದ್ದು, ಮಧ್ಯಾಹ್ನ 29-42 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 16-23 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ ಕೃಷಿ ಭೂಮಿಯನ್ನು ಆಳವಾಗಿ ಉಳುಮೆ ಮಾಡಬೇಕು. ಹಾಗೆ ಮಾಡುವುದರಿಂದ ನೀರು ಮಣ್ಣಿನಲ್ಲಿ ಚೆನ್ನಾಗಿ ಹಿಂಗುತ್ತದೆ ಹಾಗೂ ಕೀಟ ಹಾಗೂ ರೋಗ ಭಾದೆ ಕಡಿಮೆಯಾಗುತ್ತದೆ.
- ✓ ಖುಷ್ಕಿ ಜಮೀನಿನಲ್ಲಿ ಬದುಗಳನ್ನು ಭದ್ರಗೊಳಿಸಬೇಕು, ಸೂಕ್ತ ಬಸಿಗಾಲುವೆಗಳನ್ನು ನಿರ್ಮಿಸಿಕೊಂಡು ನೀರು ನಿಲ್ಲದಂತೆ ನೋಡಿಕೊಳ್ಳಿ
- ✓ ಬಿತ್ತನೆಗೆ ಬೇಕಾದ ಉತ್ತಮ ಗುಣಮಟ್ಟದ ಬೀಜಗಳನ್ನು ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ಖರೀದಿಸಲು ಸೂಚಿಸಲಾಗಿದೆ
- ✓ **ಏಕಬೆಳೆ ಪದ್ದತಿಯಲ್ಲಿ ಈ ಕೆಳಗಿನ ದೀರ್ಘಾವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**

  ತೊಗರಿ : ಟಿ.ಟಿ.ಬಿ–7, ಬಿ.ಆರ್.ಜಿ–1,2,4ಮತ್ತು 5

  ಹರಳು: ಡಿ.ಸಿ.ಎಸ್–9 (ಜ್ಯೊತಿ), ಡಿ.ಸಿ.ಎಚ್–177 ಮತ್ತು 32
- ✓ **ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ.**

  ರಾಗಿ: ಇಂಡಾಫ್–9, ಎಳ್ಳು : ನವಿಲೆ–1, ಟಿ–7, ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1

  ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ
- ✓ ದ್ವಿದಳ ಧಾನ್ಯ ಬೆಳೆಗಳನ್ನು ಬಿತ್ತುವ ಮುನ್ನ ಜೈವಿಕ ಗೊಬ್ಬರಗಳಾದ ರೈಜೋಬಿಯಮ್ ನಿಂದ ಬೀಜೋಪಚಾರ ಮಾಡಬೇಕು
- ✓ ಟೊಮ್ಯಾಟೊ ಹಾಗೂ ಇನ್ನಿತರೆ ತರಕಾರಿ ಬೆಳೆಗಳಿಗೆ ರಕ್ಷಣೆ ಕೊಡುವುದು ಅತಿ ಮುಖ್ಯ.

ಸಸ್ಯ ಸಂರಕ್ಷಣೆ:

- ✓ ಮುಂದಿನ ಒಂದೆರಡು ದಿನಗಳು ಮಳೆ ಬರುವ ಸಂಭವವಿರುವುದರಿಂದ ಔಷಧಿ ಸಿಂಪರಣೆ ಮಾಡದಿರಿಲು ಸೂಚಿಸಲಾಗಿದೆ.

ನೋಡಲ್ ಅಧಿಕಾರಿ:

ಕೃಷಿ ಹವಾಮಾನ ವಿಭಾಗ

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು